# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 705 |
| ಸದಸ್ಯರ ಹೆಸರು | : | ಶ್ರೀ ಹೆಚ್. ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13.12.2024. |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು: ಈ ಅಂಗನವಾಡಿ ಕೇಂದ್ರಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು: (ಜಿಲ್ಲಾವಾರು ವಿವರ ನೀಡುವುದು: | ರಾಜ್ಯದಲ್ಲಿ ಒಟ್ಟು 69919 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು ಸದರಿ ಅಂಗನವಾಡಿ ಕೇಂದ್ರಗಳಲ್ಲಿ ಒಟ್ಟು 36,13,395 ಮಕ್ಕಳು ದಾಖಲಾಗಿರುತ್ತಾರೆ.<br>ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-01** ರಲ್ಲಿ ಒದಗಿಸಿದೆ. |
| ಆ. | ಈ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಮಕ್ಕಳಿಗೆ ಸರ್ಕಾರದಿಂದ ನೀಡುತ್ತಿರುವ ಸೌಕರ್ಯಗಳೇನು: (ವಿವರ ನೀಡುವುದು) | ಸಕ್ಷಮ್ ಅಂಗನವಾಡಿ ಮತ್ತು ಪೋಷಣ್ 2.0 ರನ್ವಯ ಅಂಗನವಾಡಿ ಕೇಂದ್ರಗಳಿಗೆ ದಾಖಲಾಗುವ ಎಲ್ಲಾ ಮಕ್ಕಳಿಗೆ ಈ ಕೆಳಕಂಡ ಸೇವೆಗಳನ್ನು ನೀಡಲಾಗುತ್ತಿದೆ. (ವಿವರವನ್ನು **ಅನುಬಂಧ-02** ರಲ್ಲಿ ಒದಗಿಸಿದೆ)<br>• ಪೂರಕ ಪೌಷ್ಠಿಕ ಆಹಾರ.<br>• ಚುಚ್ಚುಮದ್ದು<br>• ಆರೋಗ್ಯ ತಪಾಸಣೆ<br>• ಮಾಹಿತಿ ಸೇವೆ<br>• ಶಾಲಾ ಪೂರ್ವ ಶಿಕ್ಷಣ |
| ಇ. | ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತಿರುವ ಆಹಾರ ಪದಾರ್ಥಗಳ ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಅಂತಹ ಪ್ರಕರಣಗಳ ವಿವರಗಳನ್ನು ನೀಡುವುದು: | ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುತ್ತಿರುವ ಆಹಾರ ಪದಾರ್ಥಗಳ ಗುಣಮಟ್ಟ ಕಳಪೆಯಾಗಿರುವುದಿಲ್ಲ. |
| ಈ. | ಆಹಾರ ಸರಬರಾಜುದಾರರೊಂದಿಗೆ ಇಲಾಖಾ ಅಧಿಕಾರಿಗಳು ಶಾಮೀಲಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು? (ವಿವರ ನೀಡುವುದು) | ಆಹಾರ ಸರಬರಾಜುದಾರರೊಂದಿಗೆ ಇಲಾಖಾ ಅಧಿಕಾರಿಗಳು ಶಾಮೀಲಾಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

**ಸಂಖ್ಯೆ:** ಮಮಇ 307 ಐಸಿಡಿ 2024

**(ಲಕ್ಷ್ಮೀ ಆರ್.ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು

## ಅನುಬಂಧ-01

| ಕ್ರ. ಸಂ. | ಜಿಲ್ಲೆಯ ಹೆಸರು | ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳು | 3-6 ವರ್ಷದ ಒಟ್ಟು ಮಕ್ಕಳು |
|---|---|---|---|
| 1 | ಬಾಗಲಕೋಟೆ | 2444 | 71568 |
| 2 | ಬೆಂಗಳೂರು(ಗ್ರಾ) | 1277 | 20093 |
| 3 | ರಾಮನಗರ | 1586 | 22268 |
| 4 | ಬೆಂಗಳೂರು(ನ) | 2877 | 72212 |
| 5 | ಬೆಳಗಾವಿ | 5656 | 172567 |
| 6 | ಬಳ್ಳಾರಿ | 1358 | 43263 |
| 7 | ಬೀದರ್ | 2051 | 44587 |
| 8 | ವಿಜಯಪುರ | 2755 | ಮ |
| 9 | ಚಾಮರಾಜನಗರ | 1442 | ದ |
| 10 | ಚಿಕ್ಕಮಗಳೂರು | 1858 | 21489 |
| 11 | ಚಿತ್ರದುರ್ಗ | 2428 | 48402 |
| 12 | ದಕ್ಷಣ ಕನ್ನಡ | 2131 | 43932 |
| 13 | ದಾವಣಗೆರೆ | 1771 | 38980 |
| 14 | ಧಾರವಾಡ | 1622 | 44640 |
| 15 | ಗದಗ | 1248 | 33875 |
| 16 | ಕಲಬುರ್ಗಿ | 3420 | 96464 |
| 17 | ಯಾದಗಿರಿ | 1568 | 55121 |
| 18 | ಹಾಸನ | 2691 | 28443 |
| 19 | ಹಾವೇರಿ | 1991 | 58354 |
| 20 | ಕೋಲಾರ | 2180 | 34792 |
| 21 | ಚಿಕ್ಕಬಳ್ಳಾಪುರ | 2014 | 26616 |
| 22 | ಕೊಡಗು | 888 | 8063 |
| 23 | ಕೊಪ್ಪಳ | 1960 | 61885 |
| 24 | ಮಂಡ್ಯ | 2558 | 30564 |
| 25 | ಮೈಸೂರು | 2933 | 56210 |
| 26 | ರಾಯಚೂರು | 2856 | 83897 |
| 27 | ಶಿವಮೊಗ್ಗ | 2563 | 42682 |
| 28 | ತುಮಕೂರು | 4199 | 58613 |
| 29 | ಉಡುಪಿ | 1222 | 21136 |
| 30 | ಉತ್ತರಕನ್ನಡ | 2782 | 39184 |
| 31 | ವಿಜಯನಗರ | 1590 | 51598 |
| **ಒಟ್ಟು** | | **69919** | **1431498** |

# ಅನುಬಂಧ-02

**1. ಪೂರಕ ಪೌಷ್ಟಿಕ ಆಹಾರ :**

ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾದ 6 ತಿಂಗಳಿಂದ 6 ವರ್ಷದ ಮಕ್ಕಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ 300 ದಿನಗಳ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.

- ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿದಿನ ರೂ.**8.00** ಮೌಲ್ಯದ **ಪೂರಕ ಪೌಷ್ಟಿಕ ಆಹಾರ**ವನ್ನು ನೀಡಲಾಗುತ್ತಿದೆ.
- **ತೀವ್ರ ಅಪೌಷ್ಟಿಕ** ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ.
- ಅಂಗನವಾಡಿಗೆ ಹಾಜರಾಗುವ **3 ವರ್ಷದಿಂದ 6** ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ **2 ದಿನ ಮೊಟ್ಟೆಯನ್ನು** ನೀಡಲಾಗುತ್ತಿದೆ.
- ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ **6** ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲೀ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 5 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.
- 6 ತಿಂಗಳಿಂದ 3 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- 3 ವರ್ಷದಿಂದ 6 ವರ್ಷದ ತೀವ್ರ / ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 20 ಗ್ರಾಂ. ಹಾಲಿನ ಪುಡಿಯನ್ನು ಮನೆಗೆ ವಿತರಿಸಲಾಗುತ್ತಿದೆ.
- ತೀವ್ರ ಅಪೌಷ್ಟಿಕ ಮಕ್ಕಳಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೌಷ್ಟಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.
- ಆರೋಗ್ಯ ಮತ್ತು ಪೌಷ್ಟಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಟಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಟಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತಿದೆ.

**2. ಜುಚ್ಚುಮದ್ದು ಕಾರ್ಯಕ್ರಮ:**

- 6 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಿಗದಿತ ಚುಚ್ಚುಮದ್ದನ್ನು ನೀಡಲಾಗುತ್ತಿದೆ.

**3. ಆರೋಗ್ಯ ತಪಾಸಣೆ:**

- ಅಂಗನವಾಡಿ ಕೇಂದ್ರದಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ನಿಯಮಿತವಾಗಿ 3 ತಿಂಗಳಿಗೊಮ್ಮೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ನಡೆಸಲಾಗುತ್ತಿದೆ.

**4.ಮಾಹಿತಿ ಸೇವೆ:**

ಅಂಗನವಾಡಿ ಕೇಂದ್ರಗಳಿಗೆ ವೈದ್ಯಾಧಿಕಾರಿಗಳು ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ಮಾಡಿದಾಗ ಹೆಚ್ಚಿನ ತಪಾಸಣೆಗೆ ಅಥವಾ ಚಿಕಿತ್ಸೆಗೆ ತಾಲ್ಲೂಕು ಆರೋಗ್ಯ ಕೇಂದ್ರ / ಜಿಲ್ಲಾ ಆರೋಗ್ಯ ಕೇಂದ್ರಕ್ಕೆ / ಪೌಷ್ಟಿಕ ಪುನರ್ವಸತಿ ಕೇಂದ್ರಗಳಿಗೆ ಕಳುಹಿಸಲು ಸೂಚಿಸುತ್ತಾರೆ. ವೈದ್ಯರು ಸೂಚಿಸಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹೆಚ್ಚಿನ ಚಿಕಿತ್ಸೆ, ತಪಾಸಣೆಗೆ ಮಕ್ಕಳನ್ನು ಕಳುಹಿಸಿಕೊಡುತ್ತಾರೆ.

**5. ಶಾಲಾಪೂರ್ವ ಶಿಕ್ಷಣ:**

ಅಂಗನವಾಡಿ ಕೇಂದ್ರಕ್ಕೆ ದಾಖಲಾದ 3-6 ವರ್ಷದ ಎಲ್ಲಾ ಮಕ್ಕಳಿಗೆ ಶಾಲಾ ಪೂರ್ವ ಶಿಕ್ಷಣವನ್ನು ವಿವಿಧ ದೈಹಿಕ, ಬೌದ್ಧಿಕ ಹಾಗೂ ಸಾಮಾಜಿಕ ಚಟುವಟಿಕೆಗಳ ಮೂಲಕ ಮಕ್ಕಳಿಗೆ ಶಿಕ್ಷಣವನ್ನು ಒದಗಿಸಲಾಗುತ್ತಿದೆ.